# Akashvani : Bangalore
# National Bulletin In Kannada
# 05.07.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.07.2024 19.35 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ದೇಶದ ರಕ್ಷಣಾ ಉತ್ಪಾದನೆಯ ಮೌಲ್ಯದಲ್ಲಿ ಶೇಖಡ ೧೬.೮ ರಷ್ಟು ಪ್ರಗತಿ: ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೨. ಬ್ರಿಟನ್ ಸಂಸತ್ ಚುನಾವಣೆ: ಲೇಬರ್ ಪಕ್ಷಕ್ಕೆ ಭರ್ಜರಿ ಜಯ; ಕೀರ್ ಸ್ಟಾರ್ಮರ್ ಮುಂದಿನ ಬ್ರಿಟನ್ ಪ್ರಧಾನಿ**

**೩. ಹಥ್ರಾಸ್ ಕಾಲ್ತುಳಿತ ಘಟನೆಯ ಸಂತ್ರಸ್ತರನ್ನು ಭೇಟಿಯಾದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ**

**೪. ವನಿತಾ ಟಿ-೨೦ ಕ್ರಿಕೆಟ್: ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ನಡುವೆ ಹಣಾಹಣಿ**

**೫. ಯೂರೋ ಕಪ್ ಫುಟ್‌ಬಾಲ್: ಇಂದಿನ ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಸ್ಪೇನ್-ಜರ್ಮನಿ ಮುಖಾಮುಖಿ**

**<><*<><>*><>**

೨೦೨೩-೨೪ನೇ ಸಾಲಿನಲ್ಲಿ ರಕ್ಷಣಾ ಉತ್ಪಾದನೆಯ ಮೌಲ್ಯದಲ್ಲಿ ದೇಶವು ಅತ್ಯಧಿಕ ಬೆಳವಣಿಗೆಯನ್ನು ಸಾಧಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ ಸಿಂಗ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಅವರು, ೨೦೨೩-೨೪ನೇ ಸಾಲಿನಲ್ಲಿ ರಕ್ಷಣಾ ಉತ್ಪಾದನೆ ಮೌಲ್ಯವು ೧ ಲಕ್ಷ ೨೬ ಸಾವಿರ ೮೮೭ ಕೋಟಿ ರೂಪಾಯಿ ತಲುಪಿದೆ. ಈ ಮೂಲಕ ಹಿಂದಿನ ಹಣಕಾಸು ವರ್ಷಕ್ಕೆ ಹೋಲಿಸಿದರೆ ಶೇಖಡ ೧೬.೮ ರಷ್ಟು ಪ್ರಗತಿ ಕಂಡಿದೆ ಎಂದು ತಿಳಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ನಾಯಕತ್ವದಲ್ಲಿ ಮೇಕ್ ಇನ್ ಇಂಡಿಯಾ ಅಭಿಯಾನವು ವರ್ಷದಿಂದ ವರ್ಷಕ್ಕೆ ಹೊಸ ಮೈಲಿಗಲ್ಲು ದಾಟುತ್ತಿದೆ. ಭಾರತವನ್ನು ಪ್ರಮುಖ ಜಾಗತಿಕ ರಕ್ಷಣಾ ಉತ್ಪಾದನಾ ಕೇಂದ್ರವಾಗಿ ಮಾರ್ಪಡಿಸಲು ಹೆಚ್ಚು ಅನುಕೂಲಕರವಾದ ವಾತಾವರಣ ಸೃಷ್ಟಿಸಲು ಸರ್ಕಾರ ಬದ್ಧವಾಗಿದೆ ಎಂದು ರಾಜನಾಥ ಸಿಂಗ್ ಹೇಳಿದ್ದಾರೆ. ಇದೇ ವೇಳೆ ರಕ್ಷಣಾ ವಲಯದ ವಿವಿಧ ಉತ್ಪಾದನಾ ತಯಾರಿಕೆ ಘಟಕಗಳಿಗೆ ರಕ್ಷಣಾ ಸಚಿವರು ಅಭಿನಂದನೆ ಸಲ್ಲಿಸಿದ್ದಾರೆ.

**<><*<><>*><>**

ಭಾರತೀಯ ರೈಲ್ವೆ ಇಲಾಖೆಯು ಈ ವರ್ಷ ೨ ಸಾವಿರದ ೫೦೦ ಜನರಲ್ ಕೋಚ್‌ಗಳನ್ನು ತಯಾರಿಸಲಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಭಾರತೀಯ ರೈಲ್ವೆ ಇಲಾಖೆಯ ಗತಿ ಶಕ್ತಿ ವಿಶ್ವವಿದ್ಯಾಲಯ ಮತ್ತು ಪ್ರಮುಖ ವಾಣಿಜ್ಯ ವಿಮಾನ ತಯಾರಕ ಏರ್‌ಬಸ್ ನಡುವಿನ ಒಪ್ಪಂದದ ನಂತರ ಮಾತನಾಡಿದ ಅವರು, ಆರ್ಥಿಕವಾಗಿ ದುರ್ಬಲ ವರ್ಗ ಮತ್ತು ಮಧ್ಯಮ ವರ್ಗದವರರಿಗೆ ಸೇವೆ ಪೂರೈಸುವುದು ಸರ್ಕಾರದ ಪ್ರಧಾನ ಉದ್ದೇಶವಾಗಿದೆ ಎಂದರು. ಕಳೆದ ವರ್ಷ ಪ್ರಧಾನಿ ನರೇಂದ್ರ ಮೋದಿ ಅವರು ಚಾಲನೆ ನೀಡಿದ ಎರಡು ಅಮೃತ್ ಭಾರತ್ ರೈಲುಗಳು ಈ ಉದ್ದೇಶಕ್ಕೆ ಅನುಗುಣವಾಗಿವೆ. ಇನ್ನೂ ೫೦ ಅಮೃತ್ ಭಾರತ್ ರೈಲುಗಳ ತಯಾರಿಕೆಯು ಈಗಾಗಲೇ ಪ್ರಾರಂಭವಾಗಿದೆ. ರೈಲುಗಳ ಸುರಕ್ಷತೆಗಾಗಿ ಇರುವ 'ಕವಚ್' ತಂತ್ರಜ್ಞಾನವನ್ನು ತ್ವರಿತಗತಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ ಎಂದು ರೈಲ್ವೆ ಸಚಿವರು ಮಾಹಿತಿ ನೀಡಿದರು. ಭಾರೀ

ಬೇಡಿಕೆ ಹಿನ್ನೆಲೆಯಲ್ಲಿ ಪ್ರಸ್ತುತ ಸುಮಾರು ೧೦ ಸಾವಿರ ವಿಶೇಷ ರೈಲುಗಳು ಕಾರ್ಯಚರಣೆ ಮಾಡುತ್ತಿವೆ ಎಂದು ಅಶ್ವಿನಿ ವೈಷ್ಣವ್ ತಿಳಿಸಿದರು.

<><*<><>*><>

ಆಗಸ್ಟ್ ೧೧ ರಂದು ನೀಟ್-ಪಿಜಿ ಪ್ರವೇಶ ಪರೀಕ್ಷೆ ೨೦೨೪ ನಡೆಯಲಿದೆ. ಎರಡು ಪಾಳಿಗಳಲ್ಲಿ ಪರೀಕ್ಷೆ ನಡೆಸಲಾಗುವುದು ಎಂದು ವೈದ್ಯಕೀಯ ವಿಜ್ಞಾನಗಳ ರಾಷ್ಟ್ರೀಯ ಪರೀಕ್ಷಾ ಮಂಡಳಿ ತಿಳಿಸಿದೆ. ಪರೀಕ್ಷೆಯ ಪರಿಷ್ಕೃತ ವೇಳಾಪಟ್ಟಿಯನ್ನು ಇಂದು ವೈದ್ಯಕೀಯ ವಿಜ್ಞಾನಗಳ ರಾಷ್ಟ್ರೀಯ ಪರೀಕ್ಷಾ ಮಂಡಳಿಯು ಬಿಡುಗಡೆ ಮಾಡಿದೆ. ಕಳೆದ ತಿಂಗಳು ನೀಟ್-ಪಿಜಿ ಪ್ರವೇಶ ಪರೀಕ್ಷೆಯನ್ನು ಮುಂದೂಡಲಾಗಿತ್ತು. ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪಗಳ ಹಿನ್ನೆಲೆಯಲ್ಲಿ ಮಂಡಳಿಯು ಈ ನಿರ್ಧಾರವನ್ನು ಕೈಗೊಂಡಿತ್ತು.

<><*<><>*><>

ಬ್ರಿಟನ್ ಸಂಸತ್ ಚುನಾವಣೆಯಲ್ಲಿ ಲೇಬರ್ ಪಕ್ಷವು ಭರ್ಜರಿ ಜಯ ದಾಖಲಿಸಿದೆ. ಹಾಲಿ ಪ್ರಧಾನಿ ರಿಷಿ ಸುನಕ್ ಅವರ ಕನ್ಸರ್ವೇಟಿವ್ ಪಕ್ಷವನ್ನು ಸೋಲಿಸುವ ಮೂಲಕ ಲೇಬರ್ ಪಕ್ಷದ ನಾಯಕ ಕೀರ್ ಸ್ಟಾರ್ಮರ್ ಬ್ರಿಟನ್‌ನ ಮುಂದಿನ ಪ್ರಧಾನಿಯಾಗಲಿದ್ದಾರೆ. ಒಂದು ದಶಕಕ್ಕೂ ಹೆಚ್ಚು ಕಾಲ ವಿರೋಧ ಪಕ್ಷದ ಸ್ಥಾನದಲ್ಲಿದ್ದ ಲೇಬರ್ ಪಕ್ಷವು ಇದೀಗ ಅಧಿಕಾರಕ್ಕೆ ಬಂದಿದೆ. ಇತ್ತೀಚಿನ ವರದಿ ಪ್ರಕಾರ, ಒಟ್ಟು ೬೫೦ ಸ್ಥಾನಗಳ ಪೈಕಿ ಲೇಬರ್ ಪಕ್ಷವು ೪೨೦ ಸ್ಥಾನಗಳಲ್ಲಿ ಜಯ ಸಾಧಿಸಿದೆ. ಮತ ಎಣಿಕೆ ಕಾರ್ಯ ಮುಂದುವರಿದಿದೆ. ತಮ್ಮ ವಿಜಯ ಭಾಷಣದಲ್ಲಿ ೬೧ ವರ್ಷ ವಯಸ್ಸಿನ ಕೀರ್ ಸ್ಟಾರ್ಮರ್, ಭಾರೀ ಜವಾಬ್ದಾರಿಯೊಂದಿಗೆ ಈ ರೀತಿಯ ಜನಾದೇಶ ಬಂದಿದೆ. ಬದಲಾವಣೆ ಈಗ ಪ್ರಾರಂಭವಾಗಲಿದೆ ಎಂದು ಹೇಳಿದ್ದಾರೆ. ಫಲಿತಾಂಶ ಹೊರಬೀಳುತ್ತಿದ್ದಂತೆ ಕೀರ್ ಸ್ಟಾರ್ಮರ್ ಅವರು ಲಂಡನ್‌ನ ಬಕಿಂಗ್‌ಹ್ಯಾಮ್ ಅರಮನೆಯಲ್ಲಿ ದೊರೆ ಮೂರನೇ ಚಾರ್ಲ್ಸ್ ಅವರನ್ನು ಭೇಟಿಯಾದರು. ಇದೇ ವೇಳೆ ಕೀರ್ ಸ್ಟಾರ್ಮರ್ ಅವರನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಅಭಿನಂದನೆ ಸಲ್ಲಿಸಿದ್ದಾರೆ. ಮತ್ತೊಂದೆಡೆ, ಬ್ರಿಟನ್ ಪ್ರಧಾನಿ ರಿಷಿ ಸುನಕ್ ಅವರು ಸೋಲಿನ ಹೊಣೆಯನ್ನು ಹೊತ್ತುಕೊಂಡಿದ್ದು, ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಬ್ರಿಟನ್ ಜನರು ಗಂಭೀರವಾದ ತೀರ್ಪು ನೀಡಿದ್ದಾರೆ. ಕಲಿಯಲು ಬಹಳಷ್ಟು ಇದೆ ಎಂದು ರಿಷಿ ಸುನಕ್ ಹೇಳಿದ್ದಾರೆ.

<><*<><>*><>

೧೨೧ ಜನರ ಸಾವಿಗೆ ಕಾರಣವಾದ ಉತ್ತರ ಪ್ರದೇಶದ ಹತ್ರಾಸ್‌ನಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಸಾವನ್ನಪ್ಪಿದವರ ಕುಟುಂಬಗಳನ್ನು ಇಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಭೇಟಿಯಾದರು. ಭೇಟಿಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಂತ್ರಸ್ತರಲ್ಲಿ ಹೆಚ್ಚಿನವರು ಆರ್ಥಿಕವಾಗಿ ಹಿಂದುಳಿದಿದ್ದಾರೆ. ಸಂತ್ರಸ್ತ ಕುಟುಂಬಗಳಿಗೆ ಗರಿಷ್ಠ ಪರಿಹಾರವನ್ನು ನೀಡಬೇಕು ಎಂದು ಒತ್ತಾಯಿಸಿದರು. ಮತ್ತೊಂದೆಡೆ, ಕಾಲ್ತುಳಿತ ಪ್ರಕರಣದ ತನಿಖೆಗಾಗಿ ರಚಿಸಲಾಗಿರುವ ವಿಶೇಷ ತನಿಖಾ ತಂಡ-ಎಸ್‌ಐಟಿ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ೧೫ ಪುಟಗಳ ವರದಿಯನ್ನು ಸಲ್ಲಿಸಿದೆ. ಸಮಾರಂಭ ಆಯೋಜಕರು, ಸಮಾರಂಭದಲ್ಲಿ ಭಾಗವಹಿಸಿದವರು ಸೇರಿದಂತೆ ಸುಮಾರು ೧೦೦ ಜನರ ಹೇಳಿಕೆಗಳನ್ನು ವರದಿಯಲ್ಲಿ ಉಲ್ಲೇಖಿಸಲಾಗಿದೆ. 'ಭೋಲೆ ಬಾಬಾ' ಎಂದೂ ಕರೆಯಲ್ಪಡುವ ಧಾರ್ಮಿಕ ಬೋಧಕ ನಾರಾಯಣ್ ಸಾಕರ್ ಹರಿ ನೇತೃತ್ವದಲ್ಲಿ ಜುಲೈ ೨ರಂದು ನಡೆದಿದ್ದ ಸತ್ಸಂಗದ ಸಂದರ್ಭದಲ್ಲಿ ಕಾಲ್ತುಳಿತ ಸಂಭವಿಸಿತ್ತು. ಈ ವೇಳೆ ೧೨೧ ಮಂದಿ ಮೃತಪಟ್ಟು, ಅನೇಕರು ಗಾಯಗೊಂಡಿದ್ದರು.

<><*<><>*><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯವು ಅಂತಾರಾಷ್ಟ್ರೀಯ ಯೋಗ ದಿನದ ಮಾಧ್ಯಮ ಸಮ್ಮಾನ-೨೦೨೪' ಗೌರವಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದೆ. ನೋಂದಾಯಿತ ಎಲ್ಲಾ ಮುದ್ರಣ ಮಾಧ್ಯಮ, ರೇಡಿಯೋ ಮತ್ತು ದೂರದರ್ಶನ ವಾಹಿನಿಗಳು ಮತ್ತು ಸಂಸ್ಥೆಗಳು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಇದೇ ೮ ಕೊನೆಯ ದಿನವಾಗಿದೆ.

ಯೋಗಕ್ಕೆ ಸಂಬಂಧಿಸಿದಂತೆ ಮಾಹಿತಿ ಪ್ರಸಾರ, ಜನರಲ್ಲಿ ಯೋಗದ ಉಪಯೋಗಗಳ ಕುರಿತು ಅರಿವು ಮೂಡಿಸುವುದು ಸೇರಿದಂತೆ ೨೦೨೪ರ ಜೂನ್ ೧೨ರಿಂದ ಜೂನ್ ೨೫ ರವರೆಗೆ ಪ್ರಸಾರ ಮಾಡಿರುವ ದೃಶ್ಯ ಶ್ರವ್ಯ ತುಣುಕುಗಳು ಅಥವಾ ಮುದ್ರಿತ ಸುದ್ದಿ, ಲೇಖನಗಳನ್ನು ಅರ್ಜಿಯೊಂದಿಗೆ ಲಗ್ಗತ್ತಿಸಬೇಕು. ಯೋಗ್ಯ ಅರ್ಜಿಗಳನ್ನು ಪರಿಶೀಲಿಸಿ, ಸ್ವತಂತ್ರ ಜೂರಿ ತಂಡವು ಅಂತಾರಾಷ್ಟ್ರೀಯ ಯೋಗ ದಿನದ ಮಾಧ್ಯಮ ಸಮ್ಮಾನ-೨೦೨೪' ಗೌರವಕ್ಕೆ ಆಯ್ಕೆ ಮಾಡಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಪ್ರಕಟಣೆ ತಿಳಿಸಿದೆ.

<><*<><>*><>

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣಕಾಸು ವರ್ಗಾವಣೆ ಪ್ರಕರಣದಲ್ಲಿ ಜಾಮೀನು ಕೋರಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಲ್ಲಿಸಿರುವ ಅರ್ಜಿ ಸಂಬಂಧ ಸಿಬಿಐ ಗೆ ಇಂದು ದೆಹಲಿ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ. ನ್ಯಾಯಮೂರ್ತಿ ನೀನಾ ಬನ್ಸಾಲ್ ಕೃಷ್ಣ ಅವರಿದ್ದ ನ್ಯಾಯಪೀಠವು, ಜಾಮೀನು ಅರ್ಜಿ ಸಂಬಂಧ ಪ್ರತಿಕ್ರಿಯೆ ಸಲ್ಲಿಸುವಂತೆ ಸಿಬಿಐ ಗೆ ನಿರ್ದೇಶಿಸಿದ್ದು, ಮುಂದಿನ ವಿಚಾರಣೆಯನ್ನು ಇದೇ ೧೭ಕ್ಕೆ ಮುಂದೂಡಿತು.

<><*<><>*><>

ಮುಂಬೈ ಮಾರುಕಟ್ಟೆಯಲ್ಲಿಂದು ಮುಂಬೈ ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೫೩ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೯ ಸಾವಿರದ ೯೯೭ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೨ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೩೨೪ ಅಂಕಗಳು ದಾಖಲಾಗಿದೆ.  ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೪೯ ಪೈಸೆಯಷ್ಟಾಗಿದೆ.

<><*<><>*><>

ಮೂರು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಮಹಿಳಾ ಕ್ರಿಕೆಟ್ ಸರಣಿಯ ಪೈಕಿ ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ  ಮೊದಲ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ವನಿತೆಯರ ತಂಡ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಭಾರತ ತಂಡ ಬೌಲಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಪ್ರಕಾರ, ದಕ್ಷಿಣ ಆಫ್ರಿಕಾ ತಂಡ ೭.೧ ಓವರ್‌ಗಳಲ್ಲಿ ೧ ವಿಕೆಟ್ ಕಳೆದುಕೊಂಡು ೫೦ ರನ್ ಮಾಡಿ ಆಡುತ್ತಿದೆ.  ಭಾರತ ಪ್ರವಾಸದಲ್ಲಿರುವ ದಕ್ಷಿಣ ಆಫ್ರಿಕಾ ವನಿತೆಯರ ತಂಡಕ್ಕೆ ಇದು ಮೂರನೇ ಕ್ರಿಕೆಟ್ ಸರಣಿಯಾಗಿದ್ದು, ಇದಕ್ಕೂ ಮೊದಲು ನಡೆದ ಮೂರು ಪಂದ್ಯಗಳ ಏಕದಿನ ಸರಣಿ ಹಾಗೂ ಏಕೈಕ ಟೆಸ್ಟ್ ಪಂದ್ಯದಲ್ಲಿ ಭಾರತ ಜಯಶಾಲಿಯಾಗಿದೆ.

<><*<><>*><>

ಯುಇಎಫ್‌ಎ ಯೂರೋಪಿಯನ್ ಫುಟ್‌ಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಇಂದು ರಾತ್ರಿ ನಡೆಯಲಿರುವ ಮೊದಲ ಕ್ವಾಟರ್‌ಫೈನಲ್ ಪಂದ್ಯದಲ್ಲಿ ಸ್ಪೇನ್ ಮತ್ತು ಜರ್ಮನಿ ತಂಡಗಳು ಮುಖಾಮುಖಿಯಾಗಲಿವೆ.  ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೩೦ಕ್ಕೆ ಆರಂಭವಾಗಲಿದೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ ೮ ಮತ್ತು ೯ ರಂದು ರಷ್ಯಾಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಮಾಸ್ಕೊದಲ್ಲಿ ನಡೆಯಲಿರುವ ಭಾರತ-ರಷ್ಯಾ ೨೨ನೇ ವಾರ್ಷಿಕ ಶೃಂಗ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ವಿದೇಶಾಂಗ ಇಲಾಖೆ ತಿಳಿಸಿದೆ.  ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಅಹ್ವಾನದ ಮೇರೆಗೆ ಅವರು ರಷ್ಯಾಗೆ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಪುಟಿನ್ ಅವರು, ಸಮಕಾಲೀನ ಪ್ರಾದೇಶಿಕ ಹಾಗೂ ಪರಸ್ಪರ ಹಿತಾಸಕ್ತಿಯ ಜಾಗತಿಕ ವಿಷಯಗಳ ಕುರಿತು ಸಮಾಲೋಚನೆ ನಡೆಸಲಿದ್ದಾರೆ.  ನಂತರ, ಪ್ರಧಾನಮಂತ್ರಿಯವರು ೯ರಂದು ಆಸ್ಟ್ರೀಯಾಗೆ ಪ್ರಯಾಣ ಬೆಳಸಲಿದ್ದು, ೧೦ ರಂದು ವಿವಿಧ ನಾಯಕರೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸಲಿದ್ದಾರೆ. ೪೧ ವರ್ಷಗಳ ಬಳಿಕ ಭಾರತದ

ಪ್ರಧಾನಿ, ಆಷ್ಟ್ರೀಯಾಗೆ ಭೇಟಿ ನೀಡುತ್ತಿರುವುದು ವಿಶೇಷವಾಗಿದೆ. ಆಸ್ಟ್ರೀಯಾ ಅಧ್ಯಕ್ಷ ಅಲೆಕ್ಸಾಂಡರ್ ವನ್ ಡೆರ್ ಬೆಲ್ಲೆನ್ ಹಾಗೂ ಚಾನ್ಸಲರ್ ಕರ್ಲ್ ನೆಹಮೇರ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಚರ್ಚೆ ನಡೆಸಲಿದ್ದಾರೆ. ನಂತರ, ಅಲ್ಲಿನ ಭಾರತೀಯ ಸಮುದಾಯದೊಂದಿಗೆ ಚರ್ಚಿಸಲಿದ್ದಾರೆ ಎಂದು ವಿದೇಶಾಂಗ ಇಲಾಖೆ ತಿಳಿಸಿದೆ.

**<><*<><>*><>**

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾಗವಹಿಸಲಿರುವ ಕ್ರೀಡಾಪಟುಗಳೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಸಂವಾದ ನಡೆಸಿದರು. ಕ್ರೀಡಾಪಟುಗಳನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಮಂತ್ರಿಯವರು, ಕ್ರೀಡಾಪಟುಗಳು ಸದಾ ಹೊಸತನಕ್ಕೆ ತುಡಿಯಬೇಕು. ಹೊಸತನ್ನು ಕಲಿಯುವ ಮನೋಭಾವನೆ ರೂಢಿಸಿಕೊಳ್ಳಬೇಕು. ವ್ಯವಸ್ಥೆಯಲ್ಲಿ ಬದಲಾವಣೆ ತರಲು ಪ್ರಯತ್ನಗಳು ಅತ್ಯಂತ ಅಗತ್ಯ. ಈ ನಿಟ್ಟಿನಲ್ಲಿ ನಿಗಾವಹಿಸುವಂತೆ ಕಿವಿಮಾತು ಹೇಳಿದರು. ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಕಲಿಯಲು ಭಾರತೀಯ ಆಟಗಾರರಿಗೆ ಅತ್ಯಂತ ಉಜ್ವಲ ಅವಕಾಶವಿದೆ. ದೇಶ ಮತ್ತು ತ್ರಿವರ್ಣ ಧ್ವಜ ಹಾರಾಡುವಂತೆ ತಮ್ಮ ಪ್ರದರ್ಶನ ನೀಡಲು ಮುಂದಾಗಬೇಕು. ದೇಶದ ಜನ ಹೆಮ್ಮೆ ಪಡುವಂತೆ ಸಾಧನೆ ಮಾಡಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸಲಹೆ ನೀಡಿದರು.

**<><*<><>*><>**

ಹೊಸ ಕ್ರಿಮಿನಲ್ ಕಾನೂನುಗಳು ನಾಗರಿಕರಿಗೆ ದೊಡ್ಡ ರೀತಿಯಲ್ಲಿ ಜೀವನವನ್ನು ಸುಲಭಗೊಳಿಸುತ್ತವೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘ್ವಾಲ್ ಹೇಳಿದ್ದಾರೆ. ಉತ್ತರ ಪ್ರದೇಶದ ಗಾಜಿಯಾಬಾದ್‌ನ ಸಿಬಿಐ ಅಕಾಡೆಮಿಯಲ್ಲಿ ನಡೆದ ಹೂಡಿಕೆ ಸಮಾರಂಭದಲ್ಲಿ ಮಾತನಾಡಿದ ಅವರು, ಹೊಸ ಕಾನೂನುಗಳು ನ್ಯಾಯದ ವಿತರಣೆಯನ್ನು ತ್ವರಿತಗೊಳಿಸುತ್ತವೆ ಎಂದರು. ನ್ಯಾಯಾಂಗ ಪ್ರಕ್ರಿಯೆಯಲ್ಲಿನ ಸುಧಾರಣೆಗಳು, ಮುಂಬರುವ ವರ್ಷಗಳಲ್ಲಿ ಭಾರತವನ್ನು ೩ನೇ ಅತಿದೊಡ್ಡ ಆರ್ಥಿಕತೆಗೆ ಕೊಂಡೊಯ್ಯುವ ಪ್ರಯತ್ನ ಮತ್ತು ಗುರಿಗೆ ಕೊಡುಗೆ ನೀಡುತ್ತವೆ ಎಂದು ಹೇಳಿದರು. ಇದೇ ವೇಳೆ ಸಚಿವರು, ೩೯ ಸಿಬಿಐ ಅಧಿಕಾರಿಗಳಿಗೆ ವಿಶಿಷ್ಟ ಸೇವೆಗಾಗಿ ರಾಷ್ಟ್ರಪತಿಗಳ ಪೊಲೀಸ್ ಪದಕ ಮತ್ತು ಗೌರವಾನ್ವಿತ ಸೇವೆಗಾಗಿ ಭಾರತೀಯ ಪೊಲೀಸ್ ಪದಕವನ್ನು ಪ್ರದಾನ ಮಾಡಿದರು.

**<><*<><>*><>**

ಜಮ್ಮು ಮತ್ತು ಕಾಶ್ಮೀರದಲ್ಲಿ ವಾರ್ಷಿಕ ಅಮರನಾಥ ಯಾತ್ರೆ ಸುಗಮವಾಗಿ ಸಾಗಿದೆ. ದರ್ಶನದ ಆರನೇ ದಿನವಾದ ನಿನ್ನೆ ೧೪ ಸಾವಿರದ ೯೭೮ ಯಾತ್ರಾರ್ಥಿಗಳು ಪವಿತ್ರ ಅಮರನಾಥ ಗುಹಾಂತರ ದೇವಾಲಯದಲ್ಲಿ ಪ್ರಾರ್ಥನೆ ಸಲ್ಲಿಸಿದರು. ಇದರೊಂದಿಗೆ, ಜೂನ್ ೨೯ ರಂದು ಯಾತ್ರೆ ಆರಂಭವಾದಾಗಿನಿಂದ ಒಟ್ಟು ೧ ಲಕ್ಷ ೩೦ ಸಾವಿರದ ೧೬೦ ಯಾತ್ರಿಕರು, ದೇಶದ ವಿವಿಧ ಭಾಗಗಳಿಂದ ಪವಿತ್ರ ಗುಹೆಗೆ ಭೇಟಿ ನೀಡಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**